ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ 57)
ನಮೂನೆ ಸಂಖ್ಯೆ 4

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್‌ಕೇಸ್ ನಂಬರ್ : 84/2024**

**ಪ್ರಾಸಾ- 3 ಚಾಸಾ- 3**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಮೊಹಮ್ಮದ್ ಅರ್ಫಾತ್ |
| ತಂದೆಯ ಹೆಸರುಃ | : | ಮೊಹಮ್ಮದ್ ಅಲ್ತಾಫ್ |
| ವಯಸ್ಸುಃ | : | 29 ವರ್ಷ |
| ಉದ್ಯೋಗಃ | : | ಚಿಕನ್ ಅಂಗಡಿ ವ್ಯಾಪಾರ |
| ವಾಸ | : | ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:29-10-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ನಿಪಿ-2 ರಲ್ಲಿ ನನ್ನ ರುಜು ಇದೆ. ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸುಮಾರು 3 ವರ್ಷಗಳ ಹಿಂದೆ ಈ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ, ಪೊಲೀಸರು ಓದಿ ಹೇಳಿಲ್ಲ, ನಾನು ಓದಿ ನೋಡಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ದಿನಾಂಕ 8-6-22ರಂದು ಪೊಲೀಸರು ಹಾಸನ ಕಸಬಾ ಹೋಬಳಿ ಕೆಐಎಡಿಬಿ ಏರಿಯಾದ ಹನುಮಂತಪುರ ಸರ್ಕಲ್ ಗೆ ಹೋಗುವ ಏಕಮುಖ ಸಂಚಾರ ರಸ್ತೆಯ ಗುರುದೇವ್ ಪ್ಲೈವುಡ್ ಫ್ಯಾಕ್ಟರಿ ಮುಂಭಾಗ ಈ ಪ್ರರಣಕ್ಕೆ ಸಂಬಂಧಿಸಿದಂತೆ ಸ್ಥ,ಳ ಮಹಜರು ಮಾಡಲು ಬಂದಿದ್ದರು ಎಂದರೆ ಸರಿಯಲ್ಲ. ಅಲ್ಲಿ ಪೊಲೀಸರು ನನ್ನನ್ನು ಕರೆಸಿದರು ಮತ್ತು ಅಲ್ಲಿ ಚಾಸಾ-1ರವರು ಸಹ ಇದ್ದರು ಎಂದರೆ ಸರಿಯಲ್ಲ.

ಚಾಸಾ-1ರವರು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಪರಿಶೀಲಿಸಿ ನಿಪಿ-2ರಂತೆ ಪಂಚನಾಮೆ ಮಾಡಿ ಸ್ಥಳದಲ್ಲಿ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

(ಆರೋಪಿತರ ಪರ ವಕೀಲರು ನ್ಯಾಯಾಲಯದಿಂದ ಹೊರಗುಳಿದಿರುವುದರಿಂದ ಹಾಜರಿರುವ ಆರೋಪಿತರಿಗೆ ಪಾಟೀಸವಾಲು ಮಾಡುತ್ತೀರಾ ಎಂದು ಕೇಳಿದಾಗ ಇಲ್ಲ ಎಂದು ನುಡಿದಿರುತ್ತಾರೆ, ಪಾಟೀಸವಾಲಿಗೆ ಕಾಲಾವಕಾಶ ನೀಡಲು ಸಕಾರಣ ಕಂಡುಬಾರದಿರುವುದರಿಂದ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಗಿದೆ.)

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**